ವಿಷಯ:- ಇಂಡಿ ತಾಲ್ಲೂಕಿನಲ್ಲಿ ಭೂಕಂಪದಿಂದ ಆಸ್ತಿ–ಪಾಸ್ತಿ ಕಳೆದುಕೊಂಡವರಿಗೆ ಪುನರ್‌ವಸತಿಯನ್ನು ಕಲ್ಪಿಸುವಲ್ಲಿ ಆಗಿರುವ ಅನ್ಯಾಯ.

1461 (2214) ಶ್ರೀ ಮಲ್ಲಿಕಾರ್ಜುನ ಖರ್ಗೆ (ಗುರುಮಿಟ್‌ಕಲ್):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಿನಾಂಕ 30-9-93ರಂದು ಆದಂತಹ ಭಾರಿ ಭೂ ಕಂಪನದಿಂದ ಇಂಡಿ ತಾಲ್ಲೂಕಿನ ಧೂಳಖೇಡ ಗ್ರಾಮದ ವಾಸಿಗಳು ತಮ್ಮ ಆಸ್ತಿ–ಪಾಸ್ತಿಯನ್ನು ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕಂಪನದಿಂದ ಆಸ್ತಿ–ಪಾಸ್ತಿಗಳನ್ನು ಕಳೆದು ಕೊಂಡವರ ಪಟ್ಟಿಯನ್ನು ತಯಾರಿಸಲಾಗಿದೆಯೇ, ಆಸ್ತಿ–ಪಾಸ್ತಿ ಕಳೆದುಕೊಂಡವರ ಸಂಖ್ಯೆ ಎಷ್ಟು?

ಇ) ಈ ಪಟ್ಟಿಯಲ್ಲಿ ಏನಾದರೂ ಬದಲಾವಣೆಯಾಗಿದೆಯೇ? ಬದಲಾವಣೆಯಾಗಿದ್ದರೆ ಕಾರಣಗಳೇನು?

ಈ) ಇದುವರೆಗೆ ಎಷ್ಟು ಜನರಿಗೆ ಮನೆಗಳನ್ನು ಕಟ್ಟಿಕೊಡಲಾಗಿದೆ, ಉಳಿದವರಿಗೆ ಮನೆಗಳನ್ನು ಕಟ್ಟಿಸಿಕೊಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):-

ಅ) ಹೌದು

ಆ) ಹೌದು, ಆಸ್ತಿ–ಪಾಸ್ತಿ ಕಳೆದುಕೊಂಡವರ ಸಂಖ್ಯೆ 237.

ಇ) ಈ ಪಟ್ಟಿಯಲ್ಲಿ ಏನಾದರೂ ಬದಲಾವಣೆ ಮಾಡಿಲ್ಲ. ಆದರೆ, ಸಾರ್ವಜನಿಕರಿಂದ ಒಂದು ತಕರಾರು ಅರ್ಜಿ ಬಂದಿದ್ದು, ಅದು ಉಪವಿಭಾಗಾಧಿಕಾರಿ, ಇಂಡಿ ಇವರಲ್ಲಿ ವಿಚಾರಣೆಯ ಹಂತದಲ್ಲಿದೆ.

ಈ) ಇದುವರೆಗೆ ಒಟ್ಟು 137 ಮನೆಗಳನ್ನು ಕಟ್ಟಿಸಿ ಕೊಡಲಾಗಿದೆ. ಇನ್ನು 101 ಮನೆಗಳನ್ನು ಕಟ್ಟಿಸಿಕೊಡಲು ಸರ್ಕಾರ ಅನುದಾನ ರೂ. 39.80 ಲಕ್ಷಗಳನ್ನು ಬಿಡುಗಡೆ ಮಾಡಿದೆ.

ವಿಷಯ:- ಅಂಗನವಾಡಿ ಸಹಾಯಕರಿಗೆ ವೇತನದಲ್ಲಿ ಹೆಚ್ಚಳ.

1463 (2450) ಶ್ರೀ ನಂಜೇಗೌಡ (ತುರುವೇಕೆರೆ):- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಅಂಗನವಾಡಿಗಳಲ್ಲಿ ಕೆಲಸ ಮಾಡುತ್ತಿರುವ ಅಂಗನವಾಡಿ ಶಿಕ್ಷಕರುಗಳಿಗೆ ಸರ್ಕಾರವು ಇತ್ತೀಚೆಗೆ ವೇತನವನ್ನು ಹೆಚ್ಚು ಮಾಡಿರುವುದು ನಿಜವೇ?

ಆ) ಹಾಗಿದ್ದಲ್ಲಿ ಇದೇ ರೀತಿ ಅಂಗನವಾಡಿಯ ಸಹಾಯಕರುಗಳಿಗೆ ಸಂಬಳವನ್ನು ಹೆಚ್ಚು ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?